ಮೇಲಿನ ವಸತಿಗೃಹಗಳ ವಾರ್ಷಿಕ ನಿರ್ವಹಣೆಯನ್ನು ಮಾಡಲಾಗುತ್ತಿದೆ.

ಈ ಕೆಳಕಂಡ ವಸತಿಗೃಹಗಳು ವಾಸಿಸಲು ಯೋಗ್ಯವಾಗಿಲ್ಲದಿದ್ದು, ಶಿಥಿಲಾವಸ್ಥೆಯಲ್ಲಿರುತ್ತದೆ.

1) ಉದಯಪುರ–1 ವಸತಿಗೃಹ

2) ಕಲ್ಕೆರೆ–4 ವಸತಿಗೃಹ

3) ಎಂ. ಶಿವರ–4 ವಸತಿಗೃಹ

4) ದಿಡಗ–4 ವಸತಿಗೃಹ

ಆ) ಸರ್ಕಾರಿ ನೌಕರರು ವಾಸವಾಗಿರಲು ಯೋಗ್ಯವಾಗಿರುವ ವಸತಿಗೃಹಗಳನ್ನು ವಾರ್ಷಿಕ ನಿರ್ವಹಣೆ ಮಾಡಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗಿದೆ. ಶಿಥಿಲಾವಸ್ಥೆಯಲ್ಲಿರುವ ವಸತಿಗೃಹಗಳನ್ನು ದುರಸ್ಥಿಗೊಳಿಸಲಾಗುವುದು.

ಇ) ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

637(723); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಾದರೆ, ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡವೇನು; ಮಾಗಡಿ ಕ್ಷೇತ್ರ ವ್ಯಾಪ್ತಿಯ ಯಾವ್ಯಾವ ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಖಿಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

ಅ) 2011ರ ಜನಗಣತಿಯನ್ವಯ ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರನ್ವಯ ರಾಜ್ಯದಲ್ಲಿನ ಅರ್ಹವಿರುವ ಗ್ರಾಮ/ಗ್ರಾಮ ಪಂಚಾಯತಿಗಳಿಗೆ ಪಟ್ಟಣ ಪಂಚಾಯತಿಯನ್ನು ಸ್ಥಾಪಿಸುವ ಪ್ರಸ್ತಾವನೆಗಳು ಪರಿಶೀಲನೆಯ ಹಂತದಲ್ಲಿರುತ್ತವೆ.

ಆ) ಗ್ರಾಮಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ 349ರಲ್ಲಿ ನಿಗದಿಪಡಿಸಿರುವಂತೆ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:

1. ಅಂಥ ಪ್ರದೇಶವು ಹತ್ತು ಸಾವಿರಕ್ಕಿಂತ ಕಡಿಮೆಯಿಲ್ಲದ, ಆದರೆ ಇಪ್ಪತ್ತು ಸಾವಿರಕ್ಕಿಂತ ಕಡಿಮೆ ಜನಸಂಖ್ಯೆಯನ್ನು ಹೊಂದಿದ್ದ ಹೊರತು;

2. ಅಂತಹ ಪ್ರದೇಶದ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್‌ಗೆ ನಾಲ್ಕು ನೂರು ನಿವಾಸಿಗಳಿಗಿಂತ ಕಡಿಮೆಯಿರದ ಹೊರತು;

3. ಕೃಷಿಯೇತರ ಚಟುವಟಿಕೆಗಳಲ್ಲಿ ಉದ್ಯೋಗದ ಶೇಕಡಾವಾರು ಒಟ್ಟು ಉದ್ಯೋಗಗಳ ಶೇಕಡಾ 50ಕ್ಕಿಂತ ಕಡಿಮೆ ಇರದ ಹೊರತು.

ಮೇಲೆ ತಿಳಿಸಿರುವ ಮಾನದಂಡಗಳನ್ವಯ, ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಅರ್ಹವಿರುವ ಗ್ರಾಮ/ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳನ್ನಾಗಿ ಪರಿವರ್ತಿಸಲು ಪರಿಶೀಲಿಸಿ ಕ್ರಮ ಜರುಗಿಸಲಾಗುವುದು.